ಸಂಖ್ಯೆ : ಇಡಿ/ಕೆಇಎ/ಆಡಳಿತ/ಸಿಆರ್-04/2023-24 ದಿನಾಂಕ: 22.09.2024

**ಸುತ್ತೋಲೆ**

ಕರ್ನಾಟಕ ಪರೀಕ್ಷಾ ಪ್ರಾಧೀಕಾರವು ಕಂದಾಯ ಇಲಾಖೆಯ ಗ್ರಾಮ ಆಡಳಿತಾಧಿಕಾರಿ ಹುದ್ದೆಗಳಿಗೆ ಮತ್ತು ಜಿಟಿಟಿಸಿ ಸಂಸ್ಥೆಯ ವಿವಿಧ ವೃಂದದ ಹುದ್ದೆಗಳಿಗೆ ದಿನಾಂಕ 29.09.2024 ರಂದು ಕಡ್ಡಾಯ ಕನ್ನಡ ಪರೀಕ್ಷೆಯನ್ನು ನಡೆಸಲಾಗುತ್ತಿದೆ.

ಮೇಲ್ಕಂಡ ಇಲಾಖೆ/ಸಂಸ್ಥೆಗಳಲ್ಲಿನ ಹುದ್ದೆಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಯ ಪ್ರವೇಶ ಪತ್ರವನ್ನು ಡೌನ್‌ಲೋಡ್ ಮಾಡಿಕೊಳ್ಳಲು ಈಗಾಗಲೇ ಲಿಂಕ್‌ನ್ನು ಬಿಡುಗಡೆಮಾಡಲಾಗಿರುತ್ತದೆ. ಕೆಲವು ಅಭ್ಯರ್ಥಿಗಳು ಒಂದಕ್ಕಿಂತ ಹೆಚ್ಚು ಹುದ್ದೆಗಳಿಗೆ ಅರ್ಜಿಗಳನ್ನು ಸಲ್ಲಿಸಿರುವ ಕಾರಣ ಒಂದಕ್ಕಿಂತ ಹೆಚ್ಚು ಪ್ರವೇಶ ಪತ್ರಗಳು ಬಿಡುಗಡೆಯಾಗಿರುತ್ತದೆ.

**ಒಂದೇ ದಿನಾಂಕದಂದು ಒಂದಕ್ಕಿಂತ ಹೆಚ್ಚು ಪರೀಕ್ಷಾ ಕೇಂದ್ರಕ್ಕೆ ಪ್ರವೇಶ ಪತ್ರ ಹೊಂದಿರುವ ಅಭ್ಯರ್ಥಿಗಳು ಯಾವುದಾದರು ಒಂದು ಪರೀಕ್ಷಾ ಕೇಂದ್ರದಲ್ಲಿ ಮಾತ್ರ ಪರೀಕ್ಷೆಗೆ ಹಾಜರಾಗತಕ್ಕದ್ದು ಮತ್ತು ಪರೀಕ್ಷೆ ನಂತರ ಪರೀಕ್ಷೆಗೆ ಹಾಜರಾದ ಪ್ರವೇಶ ಪತ್ರದೊಂದಿಗೆ ಅಭ್ಯರ್ಥಿಯು ಹಾಜರಾಗದೆ ಉಳಿದ ಇನ್ನೊಂದು ಪರೀಕ್ಷಾ ಕೇಂದ್ರದ ಪ್ರವೇಶ ಪತ್ರವನ್ನು ಖುದ್ದಾಗಿ ಅಥವಾ ಅಂಚೆ ಮೂಲಕ ದಿನಾಂಕ 05.10.2024 ರೊಳಗೆ ಪ್ರಾಧಿಕಾರಕ್ಕೆ ಸಲ್ಲಿಸತಕ್ಕದ್ದು.**

ದಿನಾಂಕ 29.09.2024 ರಂದು ನಡೆಯಲಿರುವ ಪರೀಕ್ಷಾ ಪ್ರವೇಶ ಪತ್ರಗಳನ್ನು ಡೌನ್‌ಲೋಡ್ ಮಾಡಿಕೊಳ್ಳಲು ಮಾತ್ರ ಅವಕಾಶ ನೀಡಲಾಗಿದ್ದು, ದಿನಾಂಕ 26.10.2024 ಮತ್ತು 27.10.2024 ರಂದು ನಡೆಸಲು ಉದ್ದೇಶಿಸಿರುವ ಪರೀಕ್ಷೆಯ ಪ್ರವೇಶ ಪತ್ರವನ್ನು ನಂತರದ ದಿನಗಳಲ್ಲಿ ಕೆಇಎ ವೆಬ್‌ಸೈಟ್‌ನಲ್ಲಿ ಬಿಡುಗಡೆಗೊಳಿಸಲಾಗುವುದು.

ಸಹಿ/-
ಕಾರ್ಯನಿರ್ವಾಹಕ ನಿರ್ದೇಶಕರು

**18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012**
18th Cross, Sampige Road, Malleshwaram, Bengaluru - 560 012.
Phone: 080 - 23 564 583 Helpline : 080 - 23 460 460.
e-mail : keauthority-ka@nic.in Website : http://kea.kar.nic.in